**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

**ಕ್ರಿ.ಮೊ. ಸಂಖ್ಯೆ 2296/2023**

ಪಿರ್ಯಾದಿ ः ರಾಜ್ಯದ ಪರವಾಗಿ ಬೀರೂರು ಪೊಲೀಸರು

-ವಿರುದ್ಧ-

ಆರೋಪಿ/ತರುः ಮಹೇಶನಾಯ್ಕ ಮತ್ತು ಇನ್ನೊಬ್ಬರು
1. ಮಹೇಶನಾಯ್ಕ ಬಿನ್ ಶೇಖರನಾಯ್ಕ

********

ಆ ರೋ ಪ ಣೆ

ದಿನಾಂಕ 01.03.2023 ರಂದು ಸಂಜೆ ಸುಮಾರು 07.30 ಗಂಟೆಯ ಸಮಯದಲ್ಲಿ ಬೀರೂರು ಪೋಲೀಸ್ ಠಾಣಾ ಸರಹದ್ದಿನಲ್ಲಿ ಚಾಸಾ-2 ಶ್ರೀಮತಿ ಆಶಾರವರು ಕೆ.ಚಟ್ಟನಹಳ್ಳಿ ಗ್ರಾಮದ ನಂಜುಂಡಪ್ಪ ಬಡಾವಣೆಯಿಂದ ಕೆ.ಚಟ್ಟನಹಳ್ಳಿ ಗ್ರಾಮದ ಹಾಲಿನ ಡೈರಿಗೆ ಹಾಲು ಹಾಕಲು ಎನ್.ಹೆಚ್.206 ರಸ್ತೆಯ ಎಡ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ 1 ನೇ ಆರೋಪಿಯಾದ ನೀವು ಚಾಲನ ಪರವಾನಗಿ ಇಲ್ಲದೆ ಕೆಎಃ66/ಎಲ್-2975 ಬಜಾಜ್-125 ಮೋಟಾರ್ ಬೈಕನ್ನು ತರೀಕೆರೆ ಕಡೆಯಿಂದ ಅತೀವೇಗ ಹಾಗೂ ಅಜಾಗರೂತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ರಸ್ತೆ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಚಾಸಾ-2 ರವರಿಗೆ ಹಿಂಬದಿಯಿಂದ ಡಿಕ್ಕಿ ಹೊಡೆಸಿ ಅಪಘಾತ ಪಡಿಸಿದ್ದು, ಆದ್ದರಿಂದ 1 ನೇ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ 1 ನೇ ಆರೋಪಿಯಾದ ನೀವು ಚಾಲನ ಪರವಾನಗಿ ಇಲ್ಲದೆ ಕೆಎಃ66/ಎಲ್-2975 ಬಜಾಜ್-125 ಮೋಟಾರ್ ಬೈಕನ್ನು ತರೀಕೆರೆ ಕಡೆಯಿಂದ ಅತೀವೇಗ ಹಾಗೂ ಅಜಾಗರೂತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ರಸ್ತೆ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಚಾಸಾ-2 ರವರಿಗೆ ಹಿಂಬದಿಯಿಂದ ಡಿಕ್ಕಿ ಹೊಡೆಸಿ ಅಪಘಾತ ಪಡಿಸಿದ ಪರಿಣಾಮ, ಚಾಸಾ-2 ರವರ ಎಡ ಮತ್ತು ಬಲಕಾಲಿನ ಮಂಡಿಗೆ, ಮುಖಕ್ಕೆ ಪೆಟ್ಟಾಗಿ ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದು, ಆದ್ದರಿಂದ 1 ನೇ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 337 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ 1 ನೇ ಆರೋಪಿಯಾದ ನೀವು ಚಾಲನ ಪರವಾನಗಿ ಇಲ್ಲದೆ ಕೆಎಃ66/ಎಲ್-2975 ಬಜಾಜ್-125 ಮೋಟಾರ್ ಬೈಕನ್ನು ತರೀಕೆರೆ ಕಡೆಯಿಂದ ಅತೀವೇಗ ಹಾಗೂ ಅಜಾಗರೂತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ರಸ್ತೆ ಬದಿಯಲ್ಲಿ ನಡೆದುಕೊಂಡು

ಹೋಗುತ್ತಿದ್ದ ಚಾಸಾ-2 ರವರಿಗೆ ಹಿಂಬದಿಯಿಂದ ಡಿಕ್ಕಿ ಹೊಡೆಸಿ ಅಪಘಾತ ಪಡಿಸಿದ ಪರಿಣಾಮ, ಚಾಸಾ-2 ರವರ ಎಡ ಮತ್ತು ಬಲ ಕಾಲಿಗೆ ಪೆಟ್ಟಾಗಿ ಗಂಭೀರ ಸ್ವರೂಪದ ಗಾಯಗಳಾಗಿದ್ದು, ಆದ್ದರಿಂದ 1 ನೇ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 338 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ 1 ನೇ ಆರೋಪಿಯಾದ ನೀವು ಕೆಎ66/ಎಲ್-2975 ಬಜಾಜ್-125 ಮೋಟಾರ್ ಬೈಕನ್ನು ಚಾಲನಾ ಪರವಾನಗಿ ಇಲ್ಲದೆ ಚಾಲನೆ ಮಾಡಿದ್ದು, ಆದ್ದರಿಂದ 1 ನೇ ಆರೋಪಿಯಾದ ನೀವು ಮೋಟಾರು ವಾಹನ ಕಾಯ್ದೆ ಕಲಂ 181 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಪ್ರಶ್ನೆ 1) ಈಗ ಓದಿ ಹೇಳಲಾದ ಆರೋಪಣೆಯನ್ನು ಕೇಳಿ ತಿಳಿದುಕೊಂಡಿರಾ?
ಉತ್ತರಃ-

ಪ್ರಶ್ನೆ 2) ನೀವು ಆರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ-

(ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ, ಕೇಳಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ನಾನೇ ಯಥಾವತ್ತಾಗಿ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆಯೆಂದು ದೃಢೀಕರಿಸುತ್ತೇನೆ.)

ದಿನಾಂಕಃ 17.03.2026

ಸಹಿ
**(ಉರ್ಮಿಳ.ವಿ.)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.